**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಟಿ.ಎ.ಶರವಣ ರವರ ನಿಯಮ 330ರ ಮೇರೆಗಿನ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಜನರು ಹೆಚ್ಚಾಗಿ ವಾಸಿಸುತ್ತಿರುವ ಜನವಸತಿ ಪ್ರದೇಶಗಳಲ್ಲಿ ಶಿಕ್ಷಣ, ಕುಡಿಯುವ ನೀರು, ವಿದ್ಯುತ್ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಯಾವುದೇ ತಾರತಮ್ಯವಿಲ್ಲದೇ ಒದಗಿಸಬೇಕೆಂದು ಅನೇಕ ಸರ್ಕಾರದ ಆದೇಶಗಳಲ್ಲಿಯೂ ಸೂಚನೆ ನೀಡಲಾಗಿದೆ ಹಾಗೂ ರಾಜ್ಯದ ಮಾನ್ಯ ಗೌರವಾನ್ವಿತ ಮುಖ್ಯಮಂತ್ರಿಗಳು ಸಹ ಅನೇಕ ಸಂದರ್ಭಗಳಲ್ಲಿ ಸಾರ್ವಜನಿಕವಾಗಿಯೂ ಈ ಬಗ್ಗೆ ಹೇಳಿರುತ್ತಾರೆ ಒಂದು ವೇಳೆ ತಾರತಮ್ಯ ಕಂಡುಬಂದಲ್ಲಿ ಕೂಡಲೇ ಸಮಾಜ ಕಲ್ಯಾಣ ಇಲಾಖೆಯ ಸಚಿವರನ್ನು ಹಾಗೂ ಅಧಿಕಾರಿಗಳ ಗಮನಕ್ಕೆ ತಂದು ತಾರತಮ್ಯವನ್ನು ಸರಿಪಡಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಲಾಗಿದೆ. ಆದರೆ ಸಮಾಜ ಕಲ್ಯಾಣ ಇಲಾಖೆಯಿಂದ ಆಡಳಿತ ಪಕ್ಷದ ಶಾಸಕರುಗಳ ಕ್ಷೇತ್ರಗಳಲ್ಲಿ ಹೆಚ್ಚಾಗಿ ವಾಸಿಸುತ್ತಿರುವ ಪರಿಶಿಷ್ಟ ಜಾತಿಯ ಜನವಸತಿ ಪ್ರದೇಶಗಳಿಗೆ ಮಾತ್ರ ಕಾಲೋನಿಗಳ ಅಭಿವೃದ್ಧಿ ಯೋಜನೆಯಡಿ ಅನುದಾನ ಬಿಡುಗಡೆ ಮಾಡಿರುವುದು ಕಂಡುಬಂದಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ **ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಂಟು ವಿಧಾನಸಭಾ ಕ್ಷೇತ್ರಗಳಿಗೆ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸಿದ್ದರೂ ಸಹ, ಅನುದಾನ ಬಿಡುಗಡೆ ಮಾಡದೇ ಕಡತ ಸಂಖ್ಯೆ: SWD: INFR: INF5: (CLNY): 69: 2024** ಮಾನ್ಯ ಸಚಿವರ ಹಂತದಲ್ಲಿ ಬಾಕಿ ಉಳಿದಿರಲು ಕಾರಣಗಳೇನು ಹಾಗೂ ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂಬ ವಿಷಯದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

2018-19ನೇ ಸಾಲಿನಿಂದ ಪ್ರಸ್ತುತದವರೆಗೆ ಪ್ರಗತಿ ಕಾಲೋನಿ ಯೋಜನೆಯಡಿ ಮಂಜೂರಾತಿ ನೀಡಿರುವ ಆದೇಶಗಳಿಗೆ ಅನುಗುಣವಾಗಿ ರೂ. 643.51 ಕೋಟಿಗಳ ಬಾಕಿ ಅನುದಾನ ಬಿಡುಗಡೆ ಮಾಡಬೇಕಾಗಿದ್ದು, ಪ್ರಸಕ್ತ ಸಾಲಿನಲ್ಲಿ ರೂ. 100 ಕೋಟಿ ಅನುದಾನ ಒದಗಿಸಿಕೊಳ್ಳಲಾಗಿರುತ್ತದೆ. 2024-25ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯ ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ 08 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿನ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಸಂಬಂಧವಾಗಿ ರೂ.40.00 ಕೋಟಿಗಳ ಅನುದಾನ ಬಿಡುಗಡೆ ಮಾಡುವಂತೆ ಮಾನ್ಯ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರು, ಭಾರತ ಸರ್ಕಾರ ರವರ ಪತ್ರ ದಿ:12-07-2024ರಲ್ಲಿ ಕೋರಿರುತ್ತಾರೆ. ಪ್ರಸಕ್ತ ಸಾಲಿನಲ್ಲಿ ಒದಗಿಸಿಕೊಳ್ಳಲಾಗಿರುವ ಅನುದಾನದ ಲಭ್ಯತೆಯನ್ನು ಆಧರಿಸಿ ಅನುದಾನ ಮಂಜೂರು ಮಾಡುವ ಪ್ರಸ್ತಾವನೆಯು ಕಡತ ಸಂಖ್ಯೆ: SWD: INFR: INF5: (CLNY): 69: 2024(1479832)ರಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ: ಸಕಇ 560 ಎಸ್‌ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**